ಆ) ಬೆಳ್ಳಾವಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಾಸಿಸುತ್ತಿರುವ ನೇಯ್ಗೆ ವೃತ್ತಿದಾರರಿಗೆ ವಾಸಿಸುವ ಮನೆ–ಕಂ–ಕಾರ್ಯಾಗಾರಗಳ ಬೇಡಿಕೆ ಸರ್ಕಾರದ ಮುಂದೆ ಇದೆಯೇ?

ಇ) ಹಾಗಿದ್ದಲ್ಲಿ, ಈ ಬೇಡಿಕೆಯನ್ನು ಈಡೇರಿಸಲು ಸರ್ಕಾರವು ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಸತೀಶ್ ಎಲ್. ಜಾರಕಿಹೋಳಿ (ಜವಳಿ ರಾಜ್ಯ ಸಚಿವರು):

ಅ) ಫಲಾನುಭವಿಗಳ ವಿವರ ಕೆಳಗಿನಂತಿದೆ:–

ಪಾವಗಡ ವಿಧಾನಸಭಾಕ್ಷೇತ್ರ	386
ಶಿರಾ ವಿಧಾನಸಭಾ ಕ್ಷೇತ್ರ	334
ತಿಪಟೂರು ವಿಧಾನ ಸಭಾ ಕ್ಷೇತ್ರ	03
ಗುಬ್ಬಿ ವಿಧಾನಸಭಾ ಕ್ಷೇತ್ರ	05
	728

ಆ) ಹೌದು.

ಇ) ಸದರಿ ಯೋಜನೆಯನ್ನು ಕೈಮಗ್ಗ ನೇಕಾರ ಸಹಕಾರ ಸಂಘಗಳ ಮೂಲಕ ಅನುಷ್ಠಾನಗೊಳಿಸಬೇಕಾಗಿದ್ದು ಬೆಳ್ಳಾವಿ ವಿಧಾನಸಭಾ ಕ್ಷೇತ್ರದಲ್ಲಿ ಯಾವುದೇ ಕೈಮಗ್ಗ ನೇಕಾರರ ಸಹಕಾರ ಸಂಘಗಳು ಇಲ್ಲದೇ ಇರುವುದರಿಂದ ಆ ಕ್ಷೇತ್ರದಲ್ಲಿ ಒಂದು ಕೈಮಗ್ಗ ನೇಕಾರ ಸಹಕಾರ ಸಂಘವನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

1831(2631) ಶ್ರೀ ಕ್ಯಾತ್‌ಸಂದ್ರ ಎನ್.ರಾಜಣ್ಣ (ಬೆಳ್ಳಾವಿ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗಂಗಾ ಕಲ್ಯಾಣ ವೈಯಕ್ತಿಕ ಕೊಳವೆ ಬಾವಿ ಯೋಜನೆಯಡಿಯಲ್ಲಿ ತುಮಕೂರು ಜಿಲ್ಲೆಯಲ್ಲಿ ಎಷ್ಟು ಜನ ಫಲಾನುಭವಿಗಳಿಗೆ ಈ ವೈಯಕ್ತಿಕ ಕೊಳವೆಬಾವಿಗಳನ್ನು ನೀಡಲಾಗಿದೆ: (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

ಆ) ಇವುಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳವರಿಗೆ ಎಷ್ಟೆಷ್ಟು ನೀಡಲಾಗಿದೆ: (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು):

ಇ) ಬೆಳ್ಳಾವಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿರುವ ಪರಿಶಿಷ್ಟ ಪಂಗಡದ ಜನರಿಗೆ ಈ ಯೋಜನೆಯಡಿಯಲ್ಲಿ ಇನ್ನೂ ಹೆಚ್ಚಿನ ಕೊಳವೆಬಾವಿಗಳ ಬೇಡಿಕೆ ಸರ್ಕಾರದ ಮುಂದೆ ಇದೆಯೇ:

ಈ) ಹಾಗಿದ್ದಲ್ಲಿ, ಈ ಬೇಡಿಕೆಯನ್ನು ಈಡೇರಿಸಲು ಸರ್ಕಾರವು ತೆಗೆದುಕೊಂಡ ಕ್ರಮವೇನು?

ಡಾ. ವೈ. ನಾಗಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಗಂಗಾ ಕಲ್ಯಾಣ ವೈಯಕ್ತಿಕ ಕೊಳವೆಬಾವಿ ಯೋಜನೆ ಅಡಿಯಲ್ಲಿ ತುಮಕೂರು ಜಿಲ್ಲೆಯಲ್ಲಿ 2004–05 ನೇ ಸಾಲಿನಲ್ಲಿ ಒಟ್ಟು 262 ಫಲಾಪೇಕ್ಷಿಗಳಿಗೆ ಕೊಳವೆಬಾವಿಗಳನ್ನು ಮಂಜೂರು ಮಾಡಲಾಗಿದೆ.

(ಅನುಬಂಧ–1 ರಲ್ಲಿ ವಿಧಾನಸಭಾ ಕ್ಷೇತ್ರವಾರು ವಿವರ ಲಗತ್ತಿಸಿದೆ)

ಇ) ಇವುಗಳಲ್ಲಿ ಪರಿಶಿಷ್ಟ ಜಾತಿಯವರಿಗೆ 80 ಮತ್ತು ಪರಿಶಿಷ್ಟ ವರ್ಗದವರಿಗೆ 30 ಕೊಳವೆಬಾವಿಗಳನ್ನು ನೀಡಲಾಗಿದೆ

(ಅನುಬಂಧ–2 ರಲ್ಲಿ ವಿಧಾನಸಭಾ ಕ್ಷೇತ್ರವಾರು ವಿವರ ಲಗತ್ತಿಸಿದೆ) .

ಇ) ಇದೆ.

ಈ) 2005–06 ನೇ ಸಾಲಿನಲ್ಲಿ ಹೆಚ್ಚಿನ ಅನುದಾನ ಬಿಡುಗಡೆ ಮಾಡಲು ಕ್ರಮ ಕೈಗೊಳ್ಳಲಾಗಿದೆ.

ಅನುಬಂಧ–1

ವಿಧಾನಸಭಾ ಸದಸ್ಯರಾದ ಶ್ರೀ ಕ್ಯಾತ್‌ಸಂದ್ರ ಎನ್. ರಾಜಣ್ಣ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 2631–ತುಮಕೂರು ಜಿಲ್ಲೆಯಲ್ಲಿ ಮಂಜೂರು ಮಾಡಿದ ವೈಯಕ್ತಿಕ ಕೊಳವೆಬಾವಿಗಳ ವಿಧಾನಸಭಾ ಕ್ಷೇತ್ರವಾರು ವಿವರ. (2004–05)

ವಿಧಾನ ಸಭಾ ಕ್ಷೇತ್ರದ ಹೆಸರು	ಕರ್ನಾಟಕ ಪ.ಜಾತಿ ಮತ್ತು ಪ.ವರ್ಗಗಳ ಅಭಿವೃದ್ಧಿ ನಿಗಮ	ಕರ್ನಾಟಕ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ	ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ
ತುಮಕೂರು	11	4	2
ತಿಪಟೂರು	10	4	–
ತುರುವೇಕೆರೆ	99	9	1
ಕೊರಟಗೆರೆ	20	4	1
ಚಿಕ್ಕನಾಯನಹಳ್ಳಿ	11	4	1
ಗುಬ್ಬಿ	13	4	1
ಸಿರಾ	18	4	3
ಮಧುಗಿರಿ	16	4	1
ಪಾವಗಡ	25	4	1
ಕಳ್ಳಂಬೆಳ್ಳ	16	4	2
ಬೆಳ್ಳಾವಿ	16	4	1
ಕುಣಿಗಲ್	13	4	1
ಹುಲಿಯೂರು ದುರ್ಗ	10	4	2
ಒಟ್ಟು	188	57	17

ಚುಕ್ಕೆ ಗುರುತಿಲ್ಲದ ಪ್ರ.ಸಂ: 2631 ಕ್ಕೆ ಅನುಬಂಧ : 2

ಗಂಗಾ ಕಲ್ಯಾಣ ವೈಯಕ್ತಿಕ ನೀರಾವರಿ ಕೊಳವೆ ಬಾವಿ ಯೋಜನೆಯಡಿಯಲ್ಲಿ 2004–05ನೇ ಸಾಲಿನಲ್ಲಿ ತುಮಕೂರು ಜಿಲ್ಲೆಗೆ ನಿಗದಿಪಡಿಸಿದ ಗುರಿ ಮತ್ತು ಸಾಧಿಸಿದ ಪ್ರಗತಿ ವಿವರ.

ಕ್ರ.ಸಂ.	ವಿಧಾನಸಭಾ ಕ್ಷೇತ್ರದ ಹೆಸರು	2004–05			
		ಗುರಿ		ಸಾಧನೆ	
		ಪ.ಜಾತಿ	ಪ.ವರ್ಗ	ಪ.ಜಾತಿ	ಪ.ವರ್ಗ
1	ತುಮಕೂರು	11	3	–	2
2	ಬೆಳ್ಳಾವಿ	16	3	11	4
3	ಕುಣಿಗಲ್	13	3	9	1
4	ಗುಬ್ಬಿ	13	3	4	1
5	ಹುಲಿಯೂರು ದುರ್ಗ	10	3	1	–
6	ಮಧುಗಿರಿ	16	4	–	–
7	ಶಿರಾ	18	4	9	4
8	ಕಳ್ಳಂಬೆಳ್ಳ	16	4	11	1
9	ಕೊರಟಗೆರೆ	20	4	6	1
10	ಪಾವಗಡ	25	5	3	10
11	ತಿಪಟೂರು	10	2	13	3
12	ತುರುವೇಕೆರೆ	9	1	9	1
13	ಚಿಕ್ಕನಾಯಕನಹಳ್ಳಿ	11	3	4	2
	ಒಟ್ಟು	188	42	80	30

1832(2632) ಶ್ರೀ ಕ್ಯಾತ್‌ಸಂದ್ರ ಎನ್.ರಾಜಣ್ಣ (ಬೆಳ್ಳಾವಿ): ಮಾನ್ಯ ಪಶುಸಂಗೋಪನೆ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಮಕೂರು ಜಿಲ್ಲೆಯಲ್ಲಿ ಒಟ್ಟು ಎಷ್ಟು ಪಶು ಚಿಕಿತ್ಸಾಲಯಗಳು ಹಾಗೂ ಪ್ರಾಥಮಿಕ ಪಶುಚಿಕಿತ್ಸಾಲಯಗಳಿವೆ (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು);

ಆ) ಗುಬ್ಬಿ ತಾಲ್ಲೂಕು ಚೇಳೂರು ಹೋಬಳಿಯ ಸಿ.ನಂದಿಹಳ್ಳಿಯಲ್ಲಿ ಪಶು ಚಿಕಿತ್ಸಾಲಯ ಪ್ರಾರಂಭಿಸುವ ಬೇಡಿಕೆ ಸರ್ಕಾರದ ಮುಂದೆ ಇದೆಯೇ;

ಇ) ಹಾಗಿದ್ದಲ್ಲಿ, ಈ ಸ್ಥಳದಲ್ಲಿ ಪಶುಚಿಕಿತ್ಸಾಲಯವನ್ನು ಪ್ರಾರಂಭ ಮಾಡಲು ಸರ್ಕಾರವು ತೆಗೆದುಕೊಂಡ ಕ್ರಮವೇನು?

ಶ್ರೀ ಮಿರಾಜುದ್ದೀನ್ ಎನ್. ಪಟೇಲ್ (ಪಶುಸಂಗೋಪನೆ ಮತ್ತು ವಕ್ಫ್ ಸಚಿವರು):

ಅ) ಪಶು ಚಿಕಿತ್ಸಾಲಯಗಳು : 84

ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರಗಳು : 115

(ಕೃತಕ ಗರ್ಭಧಾರಣಾ ಕೇಂದ್ರಗಳು ಸೇರಿ)